ಬೆಳೆಹಾನಿ

368 (131) ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2009–10, 2010–11ನೇ ಸಾಲಿನಲ್ಲಿ ಹಳಿಯಾಳ ತಾಲ್ಲೂಕಿನಲ್ಲಿ ರೈತರು ಬೆಳೆದ ಭತ್ತ, ಗೋವಿನ ಜೋಳ ಮತ್ತು ಹತ್ತಿ ಇನ್ನಿತರ ಬೆಳೆಗಳು ಮಳೆಯ ಅತಿವೃಷ್ಟಿಯಿಂದ ಪೂರ್ಣವಾಗಿ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬೆಳೆಗಳ ಹಾನಿಗೊಳಗಾದ ರೈತರುಗಳಿಗೆ ಸರ್ಕಾರ ಸಹಾಯ ಧನವನ್ನೇನಾದರೂ ನೀಡಿದೆಯೇ;

ಇ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ನೀಡಲಾಗಿದೆ; (ಪೂರ್ಣ ವಿವರಗಳನ್ನು ನೀಡುವುದು)?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):

ಅ) ಬಂದಿದೆ.

ಆ) ಈ ಬೆಳೆಗಳ ಹಾನಿಗೊಳಗಾದ ರೈತರುಗಳಿಗೆ ಪರಿಹಾರ ನೀಡಲಾಗಿದೆ.

ಇ) ಪರಿಹಾರ ನೀಡಿದ ವಿವರ ಈ ಕೆಳಕಂಡಂತೆ ಇದೆ.

ಕ್ರ.ಸ.	ಬೆಳೆ	ಪರಿಹಾರ ನೀಡಿದ ಮೊತ್ತ (ರೂ.ಗಳಲ್ಲಿ)	
		2009–10	**2010–11**
1	ಭತ್ತ	11200–00	800–00
2	ಹತ್ತಿ	12720–00	––
3	ಜೋಳ	9,800–00	––
4	ಟೊಮೆಟೋ	––	20,500–00
	ಒಟ್ಟು	**33,720–00**	**21,300–00**

ಐ.ಟಿ.ಐ. ಕಾಲೇಜು ಮಂಜೂರಾತಿ

369 (569) ಶ್ರೀ ಸುರೇಶ್‌ಗೌಡ (ನಾಗಮಂಗಲ): ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕಿನ ಕೊಪ್ಪ ಗ್ರಾಮದಲ್ಲಿ ಸರ್ಕಾರಿ ಐ.ಟಿ.ಐ. ಕಾಲೇಜು ಪ್ರಾರಂಭಿಸಲು ಸ್ಥಳೀಯರು ಬೇಡಿಕೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಕಿರಿಯ ತರಬೇತಿ ಅಧಿಕಾರಿಗಳ ನೇಮಕಾತಿ

370 (792) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ): ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಕೆ.ಪಿ.ಎಸ್.ಸಿ.ಯಿಂದ ನೇಮಕಾತಿ ಮಾಡುವಾಗ ಅಭ್ಯರ್ಥಿಗಳು ಅರ್ಹತೆ ಸಲುವಾಗಿ ಸಲ್ಲಿಸುವ ಅನುಭವ ಪ್ರಮಾಣ ಪತ್ರಗಳ ನೈಜತೆಗಳನ್ನು ಪರಿಶೀಲಿಸುವ ಜವಾಬ್ದಾರಿ ಕೆ.ಪಿ.ಎಸ್.ಸಿ.ಯದೇ ಅಥವಾ ಇಲಾಖೆಯದೇ ;

ಆ) ಪರಿಶೀಲಿಸುವ ಅಧಿಕಾರ ಇಲಾಖೆಯದಾಗಿದ್ದಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಎಲ್‌ಡಿ/116/ಇಟಿಐ/2010 ಬಗ್ಗೆ ಇಲಾಖೆಯು ಕೈಗೊಂಡ ಕ್ರಮವೇನು ; ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

ಇ) ಕಳೆದ ಮೂರು ವರ್ಷಗಳಲ್ಲಿ ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಕೆ.ಪಿ.ಎಸ್.ಸಿ.ಯಿಂದ ನೇಮಕಾತಿ ಮಾಡಿದ ಎಲ್ಲಾ ಅಭ್ಯರ್ಥಿಗಳ ಅನುಭವ ಪ್ರಮಾಣ ಪತ್ರಗಳನ್ನು ಪರಿಶೀಲಿಸಲಾಗಿದೆಯೇ (ಅಭ್ಯರ್ಥಿಗಳ ಅನುಭವ ಪ್ರಮಾಣ ಪತ್ರಗಳ ಪ್ರತಿಯನ್ನು ಒದಗಿಸುವುದು) ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಕರ್ನಾಟಕ ಲೋಕಸೇವಾ ಆಯೋಗವು ಕಾರ್ಯಾನೆ ಮತ್ತು ಬಾಯ್ಲರುಗಳ ಇಲಾಖೆಯ ಸೇವೆ ಪಡೆದು ಆಯ್ಕೆಯಾದ ಅಭ್ಯರ್ಥಿಗಳ ಅನುಭವ ಪ್ರಮಾಣಪತ್ರಗಳ ನೈಜತೆಗಳನ್ನು ಪರಿಶೀಲಿಸುತ್ತದೆ.

ಆ) ಕೆ.ಪಿ.ಎಸ್.ಸಿ.ಯು ಆಯ್ಕೆ ಪಟ್ಟಿಯ ಜೊತೆ ಆಯ್ಕೆಯಾದವರ ಅರ್ಜಿಗಳು ಹಾಗೂ ಜೆರಾಕ್ಸ್ ಅನುಭವ ಪ್ರಮಾಣ ಪತ್ರಗಳ ಪ್ರತಿಗಳನ್ನು ಒದಗಿಸಿರುತ್ತಾರೆ. ಈ ಅರ್ಜಿಗಳಲ್ಲಿ ಇರುವ ಜೆರಾಕ್ಸ್ ಪ್ರತಿಗಳು ಹಾಗೂ ಅಭ್ಯರ್ಥಿಗಳು ಒದಗಿಸಿದ ಮೂಲ ಪ್ರಮಾಣ ಪತ್ರಗಳು ಹೊಂದಾಣಿಕೆಯಾಗುತ್ತವೆಯೇ ಎಂದು ಇಲಾಖೆಯಲ್ಲಿ ಪರಿಶೀಲಿಸಲಾಗುವುದು. ಉಲ್ಲೇಖಿತ ಪತ್ರದಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಹಾಜರಾದ ಅಭ್ಯರ್ಥಿಗಳು ಒದಗಿಸಿದ ಅನುಭವ ಪ್ರಮಾಣ ಪತ್ರಗಳು ಹಾಗೂ ಕೆ.ಪಿ.ಎಸ್.ಸಿ.ಯಿಂದ